# Akashvani : Bangalore
# Regional Bulletin In Kannada

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**03.08.2024 / 18.40 hrs**

<u>ಮುಖ್ಯಾಂಶಗಳು</u>

೧. ರಾಜ್ಯ ಸರ್ಕಾರದ ವಿರುದ್ಧ ಬಿಜೆಪಿ-ಜೆಡಿಎಸ್‌ನಿಂದ ಮೈಸೂರು ಚಲೋ ಪಾದಯಾತ್ರೆ ; ಕಾಂಗ್ರೆಸ್ ಪಕ್ಷದಿಂದ ಜನಾಂದೋಲನ ಸಭೆ ಆಯೋಜನೆ

೨. ಅಂಗಾಂಗ ದಾನದಲ್ಲಿ ಕರ್ನಾಟಕಕ್ಕೆ ದೇಶದಲ್ಲೇ ೨ನೇ ಸ್ಥಾನ ; ಬಿಪಿಎಲ್ ಕಾರ್ಡ್ ರೋಗಿಗಳಿಗೆ ಉಚಿತ ಅಂಗಾಂಗ ಕಸಿ - ದಿನೇಶ್ ಗುಂಡೂರಾವ್

೩. ಮಳೆ ಪೀಡಿತ ಚಿಕ್ಕಮಗಳೂರಿಗೆ ವಿಶೇಷ ಪರಿಹಾರ ಪ್ಯಾಕೇಜ್ ಘೋಷಿಸಲು ಮುಖ್ಯಮಂತ್ರಿಗಳಿಗೆ, ಸಚಿವ ಕೆ.ಜೆ. ಜಾರ್ಜ್ ಮನವಿ

೪. ಪ್ಯಾರಿಸ್ ಒಲಿಂಪಿಕ್ಸ್ ; ಬಿಲ್ಲುಗಾರಿಕೆಯ ಮಹಿಳೆಯರ ವೈಯಕ್ತಿಕ ವಿಭಾಗದ ಕ್ವಾರ್ಟರ್ ಫೈನಲ್ಸ್ - ಭಾರತದ ದೀಪಿಕಾ ಕುಮಾರಿಗೆ ಸೋಲು

**<><*<><>*><>**

ಮೈಸೂರು ಅಭಿವೃದ್ಧಿ ಪ್ರಾಧಿಕಾರ ಹಗರಣದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಪಾತ್ರವಿದ್ದು, ತಮ್ಮ ಸ್ಥಾನಕ್ಕೆ ಅವರು ರಾಜಿನಾಮೆ ನೀಡಬೇಕೆಂದು ಆಗ್ರಹಿಸಿ, ಬಿಜೆಪಿ-ಜೆಡಿಎಸ್ ಪಕ್ಷಗಳು ಜಂಟಿಯಾಗಿ ಇಂದಿನಿಂದ ಆರಂಭಿಸಿರುವ ೮ ದಿನಗಳ 'ಮೈಸೂರು ಚಲೋ' ಪಾದಯಾತ್ರೆಗೆ ಇಂದು ಚಾಲನೆ ದೊರೆತಿದೆ. ಬಿಜೆಪಿ ಹಿರಿಯ ನಾಯಕ ಹಾಗೂ ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ, ಹಾಗೂ ಜೆಡಿಎಸ್ ಮುಖಂಡ ಕೇಂದ್ರ ಸಚಿವ ಹೆಚ್.ಡಿ ಕುಮಾರಸ್ವಾಮಿ, ಪಾದಯಾತ್ರೆಗೆ ಬೆಂಗಳೂರು ನಗರದ ಕೆಂಗೇರಿಯಲ್ಲಿ ಬೆಳಿಗ್ಗೆ ಚಾಲನೆ ನೀಡಿದರು. ಬಳಿಕ ಮಾತನಾಡಿದ ಬಿ.ಎಸ್. ಯಡಿಯೂರಪ್ಪ, ಕಾಂಗ್ರೆಸ್ ಸರ್ಕಾರದ ಭ್ರಷ್ಟಾಚಾರವನ್ನು ಸಹಿಸಲು ಸಾಧ್ಯವಿಲ್ಲ. ಮುಖ್ಯಮಂತ್ರಿ ಸಿದ್ದರಾಮಯ್ಯ ರಾಜೀನಾಮೆ ನೀಡುವವರೆಗೂ ತಮ್ಮ ಹೋರಾಟ ಮುಂದುವರೆಯಲಿದೆ ಎಂದರು. ಹೆಚ್.ಡಿ.ಕುಮಾರಸ್ವಾಮಿ ಮಾತನಾಡಿ, ಭ್ರಷ್ಟಚಾರದ ವಿರುದ್ಧ ಹೋರಾಡಲು ಈ ಪಾದಯಾತ್ರೆ ಹಮ್ಮಿಕೊಳ್ಳಲಾಗಿದೆ. ಮೂಡ ಮಾತ್ರವಲ್ಲದೇ ವಿವಿಧ ನಿಗಮಗಳಲ್ಲೂ ಬಹುಕೋಟಿ ಹಗರಣಗಳು ನಡೆದಿದ್ದು, ಇದರ ವಿರುದ್ಧ ಒಗ್ಗಟ್ಟಿನಿಂದ ವಿರೋಧ ವ್ಯಕ್ತಪಡಿಸಲಾಗುತ್ತಿದೆ ಎಂದು ಹೇಳಿದರು. ಪೂರ್ವನಿಗದಿಯಂತೆ ಇಂದಿನಿಂದ ಇದೇ ೧೦ರವರೆಗೆ ಬೆಂಗಳೂರಿನಿಂದ ಮೈಸೂರಿನವರೆಗೆ ಜಂಟಿ ಪಾದಯಾತ್ರೆ ನಡೆಯಲಿದೆ. ೧೪೦ ಕಿಲೊಮೀಟರ್ ಪಾದಯಾತ್ರೆ ಇದಾಗಿದ್ದು, ಮೈಸೂರಿನ ಸಮಾರೋಪ ಕಾರ್ಯಕ್ರಮ ಹೊರತುಪಡಿಸಿ, ರಾಮನಗರ, ಚನ್ನಪಟ್ಟಣ, ಮದ್ದೂರು, ಮಂಡ್ಯ ಮತ್ತು ಶ್ರೀರಂಗಪಟ್ಟಣದಲ್ಲಿ ಬಹಿರಂಗ ಸಭೆಗಳು ನಡೆಯಲಿವೆ.

**<><*<><>*><>**

ಬೆಂಗಳೂರಿನಿಂದ ಮೈಸೂರಿನವರೆಗೆ ಬಿಜೆಪಿ-ಜೆಡಿಎಸ್ ಕೈಗೊಂಡಿರುವ ಮೈಸೂರು ಚಲೋ ಪಾದಯಾತ್ರೆಗೆ ಪ್ರತ್ಯುತ್ತರವಾಗಿ ಕಾಂಗ್ರೆಸ್ ಪಕ್ಷ ರಾಮನಗರದಲ್ಲಿಂದು ಜನಾಂದೋಲನ ಕಾರ್ಯಕ್ರಮ ಆಯೋಜಿಸಿತ್ತು. ಈ ಕಾರ್ಯಕ್ರಮದಲ್ಲಿ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಸಚಿವರಾದ ಎಂ.ಬಿ. ಪಾಟೀಲ್, ಜಮೀರ್ ಅಹಮ್ಮದ್ ಖಾನ್, ಎಂ.ಸಿ. ಸುಧಾಕರ್ ಸೇರಿದಂತೆ ಹಲವರು ಪಾಲ್ಗೊಂಡಿದ್ದರು. ಸಭೆಯಲ್ಲಿ ಮಾತನಾಡಿದ ಡಿ.ಕೆ. ಶಿವಕುಮಾರ್, ಬಿಜೆಪಿ ಆಡಳಿತದಲ್ಲಿ ಹಲವು ಹಗರಣಗಳು ನಡೆದಿದ್ದರೂ ಅವುಗಳು ತನಿಖೆಗೆ ಬಂದಿಲ್ಲ. ತಮ್ಮ ಈ ಎಲ್ಲಾ ಪ್ರಶ್ನೆಗಳಿಗೆ ಮೈಸೂರು ಚಲೋ ಪಾದಯಾತ್ರೆಯಲ್ಲಿ ಪಾಲ್ಗೊಂಡಿರುವ ಬಿಜೆಪಿ ಮುಖಂಡರು ಉತ್ತರಿಸಬೇಕು ಎಂದರು. ಬಳಿಕ ಮಾತನಾಡಿದ ಎಂ.ಬಿ. ಪಾಟೀಲ್,

ಬಹುಮತದೊಂದಿಗೆ ಅಧಿಕಾರಕ್ಕೆ ಬಂದಿರುವ ಸಿದ್ದರಾಮಯ್ಯ ಸರ್ಕಾರವನ್ನು ಉರುಳಿಸಲು ಬಿಜೆಪಿ ಮತ್ತು ಜೆಡಿಎಸ್ ಪಿತೂರಿ ರೂಪಿಸಿವೆ ಎಂದು ಆರೋಪಿಸಿದ್ದಾರೆ ಮುಡಾ ಪ್ರಕರಣದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯನವರ ಯಾವುದೇ ಪಾತ್ರವಿಲ್ಲ. ಈ ಪ್ರಕರಣ ಬಿಜೆಪಿ ಅಧಿಕಾರದಲ್ಲಿದ್ದಾಗಲೇ ನಡೆದಿದ್ದು, ಈಗ ರಾಜಭವನವನ್ನು ದುರ್ಬಳಕೆ ಮಾಡಿಕೊಳ್ಳಲಾಗುತ್ತಿದೆ ಎಂದು ಆಕ್ಷೇಪ ವ್ಯಕ್ತಪಡಿಸಿದರು.

**<><*<><>*><>**

ಆತಂಕಕಾರಿ ಜೀವಹಾನಿ ಮತ್ತು ಆಸ್ತಿ-ಪಾಸ್ತಿ ಹಾನಿಗೆ ಕಾರಣವಾದ ಕೇರಳದ ವಯನಾಡಿನಲ್ಲಿ ಸಂಭವಿಸಿದ ಭೂಕುಸಿತದ ಸಂತ್ರಸ್ತರಿಗೆ, ರಾಜ್ಯ ಸರ್ಕಾರದಿಂದ ೧೦೦ ಮನೆಗಳನ್ನು ನಿರ್ಮಿಸಿ ಕೊಡುವುದಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ಘೋಷಿಸಿದ್ದಾರೆ. ಈ ಕುರಿತು ಸಾಮಾಜಿಕ ಮಾಧ್ಯಮದಲ್ಲಿ ತಿಳಿಸಿರುವ ಅವರು, ಈ ದುಃಖಕರ ಪರಿಸ್ಥಿತಿಯಲ್ಲಿ ಕೇರಳದೊಂದಿಗೆ ಕರ್ನಾಟಕ ನಿಂತಿದ್ದು, ಕರ್ನಾಟಕದಿಂದ ಸಂಪೂರ್ಣ ಬೆಂಬಲ ನೀಡುವ ಕುರಿತು ಕೇರಳ ಮುಖ್ಯಮಂತ್ರಿ ಪಿಣರಾಯಿ ವಿಜಯನ್ ಅವರಿಗೆ ತಿಳಿಸಿದ್ದು, ಸಂತ್ರಸ್ತರಿಗೆ ಮನೆ ನಿರ್ಮಿಸಿಕೊಡುವುದಾಗಿ ಭರವಸೆ ನೀಡಲಾಗಿದೆ ಎಂದು ತಿಳಿಸಿದ್ದಾರೆ.

**<><*<><>*><>**

ರಾಜ್ಯದಲ್ಲಿ ಅಂಗಾಂಗಗಳ ಬೇಡಿಕೆ ಹೆಚ್ಚಿದ್ದು, ಅಂಗಗಳ ಪೂರೈಕೆಯಲ್ಲಿ ಕೊರತೆಯಿದೆ. ಇದರ ಪರಿಣಾಮವಾಗಿ ಅಗತ್ಯವಿರುವ ಅಂಗಾಂಗ ಸೂಕ್ತ ಸಮಯಕ್ಕೆ ಸಿಗದಿರುವುದು ಅನೇಕ ರೋಗಿಗಳ ಸಾವಿಗೆ ಕಾರಣವಾಗುತ್ತದೆ ಎಂದು ಆರೋಗ್ಯ ಇಲಾಖೆ ಸಚಿವ ದಿನೇಶ್ ಗುಂಡೂರಾವ್ ತಿಳಿಸಿದ್ದಾರೆ. ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಾಗೂ ವಿವಿಧ ಇಲಾಖೆಗಳು ಬೆಳಗಾವಿಯಲ್ಲಿಂದು ಆಯೋಜಿಸಿದ್ದ ಭಾರತೀಯ ಅಂಗಾಂಗ ದಾನ ದಿನ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಅಂಗಾಂಗ ದಾನದಲ್ಲಿ ಕರ್ನಾಟಕ ದೇಶದಲ್ಲಿ ೨ನೇ ಸ್ಥಾನದಲ್ಲಿದೆ. ದಾನ ಮಾಡಿದ ಪ್ರತಿ ಕುಟುಂಬಗಳನ್ನು ರಾಜ್ಯ ಸರ್ಕಾರ ಸನ್ಮಾನಿಸುತ್ತಿದೆ. ಅದೇ ರೀತಿಯಲ್ಲಿ ಗಣರಾಜ್ಯೋತ್ಸವ ಹಾಗೂ ಸ್ವಾತಂತ್ರ್ಯ ದಿನಾಚರಣೆ ಅಂಗವಾಗಿ ಜಿಲ್ಲಾಡಳಿತದಿಂದ ದಾನಿಗಳ ಕುಟುಂಬಸ್ಥರನ್ನು ಸನ್ಮಾನಿಸಬೇಕು ಎಂದು ಈಗಾಗಲೇ ಜಿಲ್ಲಾಡಳಿತಕ್ಕೆ ಸೂಚಿಸಲಾಗಿದೆ ಎಂದು ತಿಳಿಸಿದರು. ರಾಜ್ಯದ ಎಲ್ಲ ಜಿಲ್ಲಾಸ್ಪತ್ರೆಯಲ್ಲಿ ಬಿಪಿಎಲ್ ಕಾರ್ಡ್ ಹೊಂದಿರುವ ರೋಗಿಗಳಿಗೆ ಉಚಿತ ಅಂಗಾಂಗ ಕಸಿ ಮಾಡಲು ತಿಳಿಸಲಾಗಿದೆ ಎಂದು ಮಾಹಿತಿ ನೀಡಿದ್ದಾರೆ. ಅಂಗಾಂಗ ದಾನದ ಬಗ್ಗೆ ಸಾರ್ವಜನಿಕರಲ್ಲಿ ಅರಿವಿನ ಕೊರತೆ ಇದೆ. ಈ ಬಗ್ಗೆ ತಪ್ಪು ಕಲ್ಪನೆಗಳನ್ನು ಹೋಗಲಾಡಿಸಿ ಇನ್ನೊಬ್ಬರ ಜೀವನದಲ್ಲಿ ಬೆಳಕು ಮೂಡಿಸುವ ಉತ್ತಮ ಕಾರ್ಯಕ್ಕೆ ಪ್ರತಿಯೊಬ್ಬರೂ ಮುಂದಾಗಬೇಕು ಎಂದರು.

**<><*<><>*><>**

ಕೇಂದ್ರ ಸರ್ಕಾರದ ಸಾಮಾಜಿಕ ಭದ್ರತೆ ಯೋಜನೆಗಳಾದ ಪ್ರಧಾನಮಂತ್ರಿ ಜೀವನ್ ಜ್ಯೋತಿ ಬೀಮಾ ಯೋಜನೆ, ಪ್ರಧಾನಮಂತ್ರಿ ಸುರಕ್ಷಾ ಬೀಮಾ ಯೋಜನೆಗಳಡಿ ಜಿಲ್ಲೆಯಲ್ಲಿ ಹೆಚ್ಚಿನ ನಾಗರಿಕರ ನೋಂದಣಿಗೆ ಕ್ರಮವಹಿಸಬೇಕು ಎಂದು ಚಿತ್ರದುರ್ಗ ಜಿಲ್ಲಾ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ. ವಿವಿಧ ವಿಮಾ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಪ್ರಧಾನಮಂತ್ರಿ ಜೀವನ್ ಜ್ಯೋತಿ ಬೀಮಾ ಯೋಜನೆಯಡಿ ೧೮ ರಿಂದ ೫೦ ವಯೋಮಾನದ ನಾಗರಿಕರು ೪೩೬ ರೂಪಾಯಿ ಮತ್ತು ಪ್ರಧಾನಮಂತ್ರಿ ಸುರಕ್ಷಾ ಬೀಮಾ ಯೋಜನೆಯಡಿ ೧೮ ರಿಂದ ೭೦ ವಯೋಮಾನದ ನಾಗರಿಕರು ೨೦ ರೂಪಾಯಿ ಪ್ರೀಮಿಯಂ ಹಣವನ್ನು ವಾರ್ಷಿಕವಾಗಿ ಪಾವತಿಸಿದರೆ, ಯಾವುದೇ ರೀತಿಯ ಮರಣ ಸಂಭವಿಸಿದರೂ ಅವರ ವಾರಸುದಾರಿಗೆ ಪ್ರತಿ ಯೋಜನೆಯಡಿ ೨ ಲಕ್ಷ ರೂಪಾಯಿವರೆಗೆ ವಿಮೆ ಸೌಲಭ್ಯ ದೊರೆಯಲಿದೆ. ಹಾಗಾಗಿ ಜಿಲ್ಲೆಯ ಎಲ್ಲ ಇಲಾಖೆಗಳ ಸರ್ಕಾರಿ ಅಧಿಕಾರಿಗಳು, ನೌಕರರು ಹಾಗೂ ಜಿಲ್ಲೆಯ ಪ್ರತಿಯೊಬ್ಬ ಅರ್ಹ ನಾಗರಿಕರು ಎರಡು ಯೋಜನೆಗಳಲ್ಲಿ ನೋಂದಣಿ ಮಾಡಿಕೊಳ್ಳುವ ನಿಟ್ಟಿನಲ್ಲಿ ಜಾಗೃತಿ ನೀಡಬೇಕು ಎಂದು ತಿಳಿಸಿದ್ದಾರೆ. ಇದೇ ಸಂದರ್ಭದಲ್ಲಿ ವಿವಿಧ ಇಲಾಖೆಗಳಲ್ಲಿ ಕ್ಲೈಮ್ ಮಾಡದೆ ಇರುವ ಖಾತೆಗಳ ಬಗ್ಗೆ ಪರಿಶೀಲನೆ ನಡೆಸಿದರು.

<><*<><>*><>

ಎನ್‌ಡಿಆರ್‌ಎಫ್ ಪರಿಹಾರದ ಜೊತೆಗೆ ಚಿಕ್ಕಮಗಳೂರಿಗೆ ವಿಶೇಷ ಪರಿಹಾರ ಪ್ಯಾಕೇಜ್ ಘೋಷಿಸಬೇಕು ಎಂದು ಸಚಿವ ಕೆ.ಜೆ. ಜಾರ್ಜ್, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಮನವಿ ಮಾಡಿದ್ದಾರೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಕಂದಾಯ ಸಚಿವ ಕೃಷ್ಣಬೈರೇಗೌಡ ಅವರೊಂದಿಗೆ ನಡೆದ ಸಭೆಯಲ್ಲಿಂದು ಈ ಕುರಿತು ಪ್ರಸ್ತಾಪಿಸಿರುವ ಕೆ.ಜೆ. ಜಾರ್ಜ್, ಚಿಕ್ಕಮಗಳೂರಿನ ಸಮಗ್ರ ಪರಿಹಾರ ಕಾರ್ಯಗಳಿಗೆ ಎನ್‌ಡಿಆರ್‌ಎಫ್ ಅನುದಾನ ಸಾಕಷ್ಟಿಲ್ಲ. ಚಿಕ್ಕಮಗಳೂರಿನ ವಿವಿಧ ತಾಲೂಕುಗಳಲ್ಲಿ ಮಳೆಯಿಂದಾಗಿ ರಸ್ತೆಗಳು ಹಾನಿಗೀಡಾಗಿದ್ದು, ಹಲವೆಡೆ ಭೂಕುಸಿತವಾಗಿದೆ ಎಂದು ವಿವರಿಸಿದರು. ಮನೆ ಸಂಪೂರ್ಣ ನಾಶವಾದವರಿಗೆ ತಾತ್ಕಾಲಿಕವಾಗಿ ೧ ಲಕ್ಷ ೨೦ ಸಾವಿರ ರೂಪಾಯಿ ಪರಿಹಾರ ನೀಡಲಾಗಿದ್ದು, ಹೆಚ್ಚುವರಿಯಾಗಿ ರಾಜೀವ್‌ಗಾಂಧಿ ವಸತಿ ಯೋಜನೆಯಡಿ ೩ ಲಕ್ಷ ೮೦ ಸಾವಿರ ರೂಪಾಯಿ ವೆಚ್ಚದಲ್ಲಿ ನೂತನ ಮನೆಗಳನ್ನು ನಿರ್ಮಿಸಲು ಅಧಿಕಾರಿಗಳಿಗೆ ಸೂಚಿಸಲಾಗಿದೆ ಎಂದು ಮಾಹಿತಿ ನೀಡಿರುವ ಅವರು, ಎಲ್ಲಾ ಪರಿಹಾರ ಕಾರ್ಯಗಳಿಗೆ ಅನುದಾನದ ಕೊರತೆಯಿದ್ದು, ಜಿಲ್ಲೆಗೆ ವಿಶೇಷ ಪರಿಹಾರ ಪ್ಯಾಕೇಜನ್ನು ನೀಡಬೇಕು ಎಂದು ಸಚಿವರು ಮುಖ್ಯಮಂತ್ರಿಗಳಿಗೆ ಔಪಚಾರಿಕವಾಗಿ ಮನವಿ ಸಲ್ಲಿಸಿದ್ದಾರೆ.

<><*<><>*><>

ಶಿವಮೊಗ್ಗ ಜಿಲ್ಲೆಯಲ್ಲಿ ಡೆಂಘಿ ನಿಯಂತ್ರಣ ಕ್ರಮಗಳನ್ನು ತೀವ್ರಗೊಳಿಸಿ, ಎಲ್ಲ ಇಲಾಖೆಗಳು ಸಮನ್ವಯತೆಯಿಂದ ಆದ್ಯತೆ ಮೇರೆಗೆ ಡೆಂಘಿ ನಿಯಂತ್ರಣ ಚಟುವಟಿಕೆಗಳಲ್ಲಿ ಭಾಗಿಯಾಗಬೇಕೆಂದು ಜಿಲ್ಲಾಧಿಕಾರಿ ಗುರುದತ್ತ ಹೆಗಡೆ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ. ಜಿಲ್ಲಾ ಮಟ್ಟದ ಡೆಂಘಿ ನಿಯಂತ್ರಣ ಕಾರ್ಯಪಡೆ ಸಭೆಯಲ್ಲಿ ಮಾತನಾಡಿದ ಅವರು, ಪ್ರತಿವಾರ ಜಿಲ್ಲಾ ಮಟ್ಟದ ಕಾರ್ಯಪಡೆ ಸಭೆ ನಡೆಸಿ, ಡೆಂಘಿ ನಿಯಂತ್ರಣವನ್ನು ಪರಿಣಾಮಕಾರಿಗೊಳಿಸಲಾಗುವುದು. ಶಿವಮೊಗ್ಗ, ಶಿಕಾರಿಪುರ, ಸಾಗರದಲ್ಲಿ ಹೆಚ್ಚು ಡೆಂಘಿ ಪ್ರಕರಣಗಳು ಕಂಡು ಬರುತ್ತಿದ್ದು ಮುಂಜಾಗ್ರತಾ ಕ್ರಮವಾಗಿ ಸೊಳ್ಳೆಗಳ ಉತ್ಪತ್ತಿ ತಾಣಗಳನ್ನು ನಾಶಪಡಿಸುವ ಅಗತ್ಯವಿದೆ ಎಂದರು.

<><*<><>*><>

ಪ್ಯಾರಿಸ್ ಒಲಿಂಪಿಕ್ಸ್ ೨೦೨೪ರ ಎಂಟನೇ ದಿನವಾದ ಇಂದು ಭಾರತ ಮಿಶ್ರ ಫಲಿತಾಂಶ ಕಂಡಿದೆ. ಬಿಲ್ಲುಗಾರಿಕೆಯ ಮಹಿಳೆಯರ ವೈಯಕ್ತಿಕ ವಿಭಾಗದಲ್ಲಿ, ಇಂದು ಅಪರಾಹ್ನ ಕ್ವಾರ್ಟರ್ ಫೈನಲ್ ತಲುಪಿ, ಮತ್ತೊಂದು ಆಸೆ ಮೂಡಿಸಿದ್ದ ಭಾರತದ ದೀಪಿಕಾ ಕುಮಾರಿ, ಕ್ವಾರ್ಟರ್ ಫೈನಲ್ಸ್‌ನಲ್ಲಿ ದಕ್ಷಿಣ ಕೊರಿಯಾದ ನಾಮ್ ಸು ಹಿಯಾನ್ ವಿರುದ್ಧ ೬-೪ ಅಂತರದಲ್ಲಿ ಪರಾಭವಗೊಂಡಿದ್ದಾರೆ. ಇದೇ ವಿಭಾಗದಲ್ಲಿ ಸ್ಪರ್ಧಿಸಿದ್ದ ಮತ್ತೊರ್ವ ಭಾರತದ ಆಟಗಾರ್ತಿ ಭಜನ್ ಕೌರ್, ೧೬ರ ಸುತ್ತಿನಲ್ಲಿ ಇಂಡೋನೇಷ್ಯಾದ ಡಿಯಾನಂದ್ ಚೊಯ್ರುನಿಸಾ ವಿರುದ್ಧ ಸೋಲು ಅನುಭವಿಸಿದರು. ಶೂಟಿಂಗ್‌ನಲ್ಲಿ ತಮ್ಮ ಮೂರನೇ ಪದಕದ ಮೇಲೆ ಕಣ್ಣಿಟ್ಟಿದ್ದ ಮನು ಭಾಕರ್ ಅವರು ಇಂದು ನಡೆದ ಮಹಿಳೆಯರ ೨೫ ಮೀಟರ್ಸ್ ಪಿಸ್ತೂಲ್ ಸ್ಪರ್ಧೆಯ ಫೈನಲ್‌ನಲ್ಲಿ ೨೮ ಅಂಕಗಳೊಂದಿಗೆ ನಾಲ್ಕನೇ ಸ್ಥಾನ ಪಡೆದು ಪದಕ ವಂಚಿತರಾಗಿದ್ದಾರೆ. ದಕ್ಷಿಣ ಕೊರಿಯಾದ ಜೆ ಯಾಂಗ್ ಜಿನ್, ೩೭ ಅಂಕಗಳೊಂದಿಗೆ ಚಿನ್ನದ ಪದಕ ಗೆದ್ದುಕೊಂಡಿದ್ದಾರೆ. ಭಾಕರ್ ಮಹಿಳೆಯರ ೧೦ ಮೀಟರ್ಸ್ ಪಿಸ್ತೂಲ್ ಮತ್ತು ಮಿಶ್ರ ತಂಡ ೧೦ ಮೀಟರ್ ಪಿಸ್ತೂಲ್ ಸ್ಪರ್ಧೆಗಳಲ್ಲಿ ಈಗಾಗಲೇ ಕಂಚಿನ ಪದಕಗಳನ್ನು ಗೆದ್ದು ಇತಿಹಾಸ ನಿರ್ಮಿಸಿದ್ದಾರೆ. ಶೂಟಿಂಗ್ ಸೇರಿದಂತೆ ಇಂದು ಭಾರತೀಯ ಕ್ರೀಡಾಪಟುಗಳು ಬಿಲ್ಲುಗಾರಿಕೆ, ಬಾಕ್ಸಿಂಗ್, ಸೇಲಿಂಗ್ ಮತ್ತು ಗಾಲ್ಫ್‌ನಲ್ಲಿ ಭಾಗವಹಿಸುತ್ತಿದ್ದಾರೆ. ಬಾಕ್ಸಿಂಗ್‌ನಲ್ಲಿ ಇಂದು ರಾತ್ರಿ ೧೨:೨೦ಕ್ಕೆ ಪುರುಷರ ೭೧ ಕೆಜಿ ವಿಭಾಗದ ಕ್ವಾರ್ಟರ್ ಫೈನಲ್‌ನಲ್ಲಿ ಭಾರತದ ನಿಶಾಂತ್ ದೇವ್ ಅವರು ಮೆಕ್ಸಿಕೊದ ಮಾರ್ಕೊ ಅಲೋನ್ಸೊ ವರ್ಡೆ ಅಲ್ವಾರೆಜ್ ಅವರನ್ನು ಎದುರಿಸಲಿದ್ದಾರೆ. ಗಾಲ್ಫ್‌ನಲ್ಲಿ ಶುಭಂಕರ್ ಶರ್ಮಾ ಮತ್ತು ಗಗನ್‌ಜೀತ್ ಭುಲ್ಲರ್ ಮೂರನೇ ಸುತ್ತಿನಲ್ಲಿ ಸ್ಪರ್ಧಿಸಲಿದ್ದಾರೆ. ಸೇಲಿಂಗ್‌ನಲ್ಲಿ, ಮಹಿಳೆಯರ ಡಿಂಗಿ ಸ್ಪರ್ಧೆಯಲ್ಲಿ ಭಾರತದ ನೇತ್ರಾ ಕುಮನನ್, ಪುರುಷರ ಡಿಂಗಿ ಸ್ಪರ್ಧೆಯಲ್ಲಿ ಭಾರತದ ವಿಷ್ಣು ಸರವಣನ್ ಸ್ಪರ್ಧಿಸಿದ್ದಾರೆ.

**<><*<><>*><>**

ಇನ್ನು ಹವಾವರ್ತಮಾನ,

ನೈಋತ್ಯ ಮುಂಗಾರು ಕರಾವಳಿಯಲ್ಲಿ ಸಕ್ರಿಯವಾಗಿತ್ತು. ದಕ್ಷಿಣ ಒಳನಾಡಿನಲ್ಲಿ ಸಾಮಾನ್ಯ ಮತ್ತು ಉತ್ತರ ಒಳನಾಡಿನಲ್ಲಿ ದುರ್ಬಲವಾಗಿತ್ತು. ಕರಾವಳಿಯ ಬಹುತೇಕ ಸ್ಥಳಗಳಲ್ಲಿ, ದಕ್ಷಿಣ ಒಳನಾಡಿನ ಹಲವು ಕಡೆಗಳಲ್ಲಿ ಮತ್ತು ಉತ್ತರ ಒಳನಾಡಿನ ಕೆಲವು ಭಾಗಗಳಲ್ಲಿ ಮಳೆಯಾಗಿದೆ.

ಬೆಂಗಳೂರು ಸುತ್ತಮುತ್ತ ಸಾಮಾನ್ಯವಾಗಿ ಮೋಡ ಕವಿದ ವಾತಾವರಣವಿರಲಿದ್ದು, ಹಗುರದಿಂದ ಸಾಧಾರಣ ಮಳೆಯಾಗುವ ಸಾಧ್ಯತೆಯಿದೆ. ಗರಿಷ್ಠ ೨೮, ಕನಿಷ್ಠ ೨೦ ಡಿಗ್ರಿ ಸೆಲ್ಸಿಯೆಸ್ ತಾಪಮಾನ ಸಂಭವ.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೩೫ ಕ್ಕೆ <>*><>**